ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಸಾಲಮನ್ನಾ ಯೋಜನೆಯ ಸ್ವಸಹಾಯ ಗುಂಪುಗಳ ಬಡ್ಡಿ ಸಹಾಯಧನದ ಕುರಿತು

ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

533 (781) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾಲಮನ್ನಾ ಯೋಜನೆ-2018ರಂತೆ ರೂ.1,00,000/-(ಒಂದು ಲಕ್ಷ) ವರೆಗೆ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್‌ಗಳಿಂದ ಸಾಲ ಸೌಲಭ್ಯ ಪಡೆದಿರುವ ರೈತರ ಸಂಖ್ಯೆ ಮತ್ತು ಮೊತ್ತವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಾಲಮನ್ನಾ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮೊತ್ತವೆಷ್ಟು; ಇನ್ನೂ ಬಿಡುಗಡೆಯಾಗದೆ ಬಾಕಿ ಉಳಿದಿರುವ ಮೊತ್ತವೆಷ್ಟು; ಬಿಡುಗಡೆ ಮಾಡಲು ವಿಳಂಬ ಆಗಿರುವುದಕ್ಕೆ ಕಾರಣಗಳೇನು;

(ಇ) ಬಾಕಿ ಇರುವ ಮೊತ್ತವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಸ್ವಸಹಾಯ ಗುಂಪುಗಳಿಗೆ ಸಹಕಾರಿ ಸಂಸ್ಥೆಗಳಿಂದ ನೀಡುವ ಸಾಲದ ಮೇಲಿನ ಬಡ್ಡಿ ಸಹಾಯಧನ ಬಿಡುಗಡೆ ಮಾಡಲು ಬಾಕಿ ಇರುವ ಮೊತ್ತ ಎಷ್ಟು; ಈ ಪೈಕಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಿಗೆ 2017-18ನೇ ಸಾಲಿನಲ್ಲಿ ಬಡ್ಡಿ ಸಹಾಯಧನ ಬಿಡುಗಡೆ ಮಾಡದೇ ಬಾಕಿ ಇರುವ ಮೊತ್ತ ಎಷ್ಟು; ಇದುವರೆಗೂ ಬಿಡುಗಡೆ ಮಾಡದೇ ಇರುವ ಕಾರಣಗಳೇನು;

(ಉ) ಮೇಲ್ಕಂಡಂತೆ 2017-18ನೇ ಸಾಲಿನಿಂದ ಬಾಕಿ ಇರುವ ಸಹಾಯಧನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?